# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಕೊಳ್ಳೇಗಾಲ

ಸಿ.ಸಿ. 17/2023

**ಪಿರ್ಯಾದುದಾರರು** **ವಿರುದ್ಧ** **ಆರೋಪಿತರುಃ**

ಕೊಳ್ಳೇಗಾಲ ಗ್ರಾಮಾಂತರ ಪೊಲೀಸ್ ಠಾಣೆ ವಿಶ್ವ ಮತ್ತು ಇತರರು

## :: ದೋಷಾರೋಪಣೆ ::

**ಶ್ರೀಮತಿ.ನಂದಿನಿ.ಎಂ.ಎಸ್, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಡಾಧಿಕಾರಿಗಳು, ಕೊಳ್ಳೇಗಾಲ, ಆದ ನಾನು ನಿಮ್ಮ ಮೇಲೆ ಅಂದರೆಃ**

1. ವಿಶ್ವ ಅಃ ರಘು ಬಿನ್ ರಾಚನಾಯಕ, 32 ವರ್ಷ,
2. ಸುಬ್ಬನಾಯಕ. ಆರ್ ಬಿನ್ ರಾಚನಾಯಕ, 37 ವರ್ಷ,
3. ರಾಚನಾಯಕ ಬಿನ್ ಲೇಟ್ ಸಿದ್ದನಾಯಕ, 68 ವರ್ಷ,
4. ಶ್ರೀಮತಿ ನಂಜಮ್ಮ ಬಿನ್ ರಾಚನಾಯಕ, 68 ವರ್ಷ,

ಎಲ್ಲರ ವಾಸಃ ಹೊಸ ಬಡಾವಣೆ, ಹರಳೆ ಗ್ರಾಮ,
ಕೊಳ್ಳೇಗಾಲ ತಾಲ್ಲೋಕು, ಚಾಮರಾಜನಗರ ಜಿಲ್ಲೆ.

**ಈ ಕೆಳಗಿನಂತೆ ದೋಷಾರೋಪಣೆ ಹೊರೆಸಿದ್ದೇನೆಃ**

ಕೊಳ್ಳೇಗಾಲ ತಾಲ್ಲೂಕು, ಕೊಳ್ಳೇಗಾಲ ಗ್ರಾಮಾಂತರ ಪೊಲೀಸ್ ಠಾಣಾ ಸರಹದ್ದಿಗೆ ಸೇರಿದ ಹರಳೆ ಗ್ರಾಮದಲ್ಲಿರುವ ಹರಳೇಶ್ವರ ಸ್ವಾಮಿ ದೇವಾಸ್ಥಾನದ ಬಳಿ ದಿನಾಂಕಃ 08.08.2022 ರಂದು ಬೆಳಿಗ್ಗೆ ಸುಮಾರು 07.45 ಗಂಟೆ ಸಮಯದಲ್ಲಿ ಸಾಕ್ಷಿ–1 ರವರು ತಮ್ಮ ಜಮೀನಿನಿಂದ ಊರಿಗೆ ಹೋಗಲು ನಡೆದುಕೊಂಡು ಹೋಗುತ್ತಿದ್ದಾಗ, 1 ನೇ ಆರೋಪಿ ಆಟೋದಲ್ಲಿ 2 ರಿಂದ 4 ನೇ ಆರೋಪಿಗಳನ್ನು ಕೂಡಿಸಿಕೊಂಡು ಬರುತ್ತಿದ್ದುದ್ದನ್ನು ನೋಡಿ ಸಾಕ್ಷಿ–1 ರವರು 1 ನೇ ಆರೋಪಿಯನ್ನು ನಿಲ್ಲಿಸಿ ನಾನು ಊರಿನಲ್ಲಿಯೇ ಇಲ್ಲ 15 ವರ್ಷಗಳಿಂದ ಬೆಂಗಳೂರಿನಲ್ಲಿದ್ದುಕೊಂಡು ಕೆಲಸ ಮಾಡಿಕೊಂಡಿದ್ದೇನೆ, ನಾನು ಯಾವಾಗಲಾದರೂ ಒಮ್ಮೆ ಊರಿಗೆ ಬರುತ್ತೇನೆ ನಾನು ನಿನ್ನ ಜಮೀನಿನ ವಿಚಾರಕ್ಕೆ ಬಂದಿಲ್ಲವಲ್ಲ, ನನಗೆ ಯಾಕೆ ಲಾಯರ್ ನೋಟಿಸ್ ಕಳುಹಿಸಿದ್ದೀಯಾ ಎಂದು ಕೇಳುತ್ತಿದ್ದಾಗ 1 ನೇ ಆರೋಪಿ ಬೋಳಿ ಮಗನೇ, ಸೂಳೆಮಗನೇ ಆಗಿನಿಂದಲೂ ನೀವೇ ತಾನೆ ತೊಂದರೆ ಕೊಡುತ್ತಿದ್ದು, ಅದಕ್ಕೆ ಕಳುಹಿಸಿದೆ ಎಂದು ಬೈದಿದ್ದು, ಆ ಮೂಲಕ ಭಾ.ದಂ.ಸಂ.ಕಲಂ 504 ಸಹವಾಚಕ ಕಲಂ 34 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೇಯದೊಳಗೆ ಎಸಗಿರುತ್ತೀರಿ ಎಂಬುದಾಗಿದೆ.

ಎರಡನೇಯದಾಗಿ ಮೇಲೆ ಹೇಳಿದ ಸ್ಥಳ, ಸಮಯ ಹಾಗೂ ದಿನಾಂಕದಂದು ಆರೋಪಿಗಳಾದ ನೀವುಗಳು ಅಪರಾಧ ಮಾಡುವ ಸಮಾನ ಉದ್ದೇಶದಿಂದ ಬಂದು, ನಿಮ್ಮ ಪೈಕಿ 2 ನೇ ಆರೋಪಿಯಾದ ನೀನು ಇವನಿಗೇನು ಒಪ್ಪಿಸುವುದು ನಾಲ್ಕು ಬಿಟ್ಟು ಕಳುಹಿಸು ಎಂದು ಹೇಳುತ್ತಾ ಸಾಕ್ಷಿ–1 ರವರನ್ನು ತಬ್ಬಿ ಹಿಡಿದು ಅಕ್ರಮ ತಡೆಯನ್ನುಂಟು ಮಾಡಿದ್ದು, ಆ ಮೂಲಕ ಭಾ.ದಂ.ಸಂ.ಕಲಂ 341 ಸಹವಾಚಕ ಕಲಂ 34 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೇಯದೊಳಗೆ ಎಸಗಿರುತ್ತೀರಿ ಎಂಬುದಾಗಿದೆ.

ಮೂರನೇಯದಾಗಿ ಮೇಲೆ ಹೇಳಿದ ಸ್ಥಳ, ಸಮಯ ಹಾಗೂ ದಿನಾಂಕದಂದು ಆರೋಪಿಗಳಾದ ನೀವುಗಳು ಅಪರಾಧ ಮಾಡುವ ಸಮಾನ ಉದ್ದೇಶದಿಂದ ಬಂದು, ನಿಮ್ಮ ಪೈಕಿ 1 ಮತ್ತು 3 ನೇ ಆರೋಪಿಗಳಾದ ನೀವುಗಳು ಕೈಗಳಿಂದ ಸಾಕ್ಷಿ–1 ರವರ ಮೈಕೈಗೆ ಹೊಡೆದು ಕಾಲಿನಿಂದ ಒದ್ದು ಸಾಮಾನ್ಯ ಸ್ವರೂಪದ ನೋವನ್ನುಂಟು ಮಾಡಿದ್ದು, ಆ ಮೂಲಕ ಭಾ.ದಂ.ಸಂ.ಕಲಂ 323 ಸಹವಾಚಕ ಕಲಂ 34 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೇಯದೊಳಗೆ ಎಸಗಿರುತ್ತೀರಿ ಎಂಬುದಾಗಿದೆ.

ನಾಲ್ಕನೇಯದಾಗಿ ಮೇಲೆ ಹೇಳಿದ ಸ್ಥಳ, ಸಮಯ ಹಾಗೂ ದಿನಾಂಕದಂದು ಆರೋಪಿಗಳಾದ ನೀವುಗಳು ಅಪರಾಧ ಮಾಡುವ ಸಮಾನ ಉದ್ದೇಶದಿಂದ ಬಂದು, ನಿಮ್ಮ ಪೈಕಿ 1 ನೇ ಆರೋಪಿಯಾದ ನೀನು ಜಗಳ ಬಿಡಿಸಲು ಬಂದ ಸಾಕ್ಷಿ–2 ರವರ ತಲೆ ಕೂದಲನ್ನು ಹಿಡಿದು ಎಳೆದಾಡಿ ಅವಮಾನ ಮಾಡಿದ್ದು, ಆ ಮೂಲಕ ಭಾ.ದಂ.ಸಂ.ಕಲಂ 354 ಸಹವಾಚಕ ಕಲಂ 34 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೇಯದೊಳಗೆ ಎಸಗಿರುತ್ತೀರಿ ಎಂಬುದಾಗಿದೆ.

ಐದನೇಯದಾಗಿ ಮೇಲೆ ಹೇಳಿದ ಸ್ಥಳ, ಸಮಯ ಹಾಗೂ ದಿನಾಂಕದಂದು ಆರೋಪಿಗಳಾದ ನೀವುಗಳು ಅಪರಾಧ ಮಾಡುವ ಸಮಾನ ಉದ್ದೇಶದಿಂದ ಬಂದು, ನಿಮ್ಮ ಪೈಕಿ 4 ನೇ ಆರೋಪಿಯಾದ ನೀನು ಉಳಿದ ಆರೋಪಿಗಳಿಗೆ ಸಾಕ್ಷಿ–1 ರವರನ್ನು ಸುಮ್ಮನೆ ಬಿಡಬೇಡಿ ಹೊಡೆದು ಸಾಯಿಸಿ ಎಂದು ಕುಮ್ಮಕ್ಕು ನೀಡಿದ್ದು, ಆ ಮೂಲಕ ಭಾ.ದಂ.ಸಂ.ಕಲಂ 114 ಸಹವಾಚಕ ಕಲಂ 34 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೇಯದೊಳಗೆ ಎಸಗಿರುತ್ತೀರಿ ಎಂಬುದಾಗಿದೆ.

ಕೊನೇಯದಾಗಿ ಮೇಲೆ ಹೇಳಿದ ಸ್ಥಳ, ಸಮಯ ಹಾಗೂ ದಿನಾಂಕದಂದು ಆರೋಪಿಗಳಾದ ನೀವುಗಳು ಅಪರಾಧ ಮಾಡುವ ಸಮಾನ ಉದ್ದೇಶದಿಂದ ಬಂದು ಸಾಕ್ಷಿ–1 ರವರಿಗೆ ಕೊಲೆ ಮಾಡುವುದಾಗಿ ಬೆದರಿಕೆ ಹಾಕಿದ್ದು, ಆ ಮೂಲಕ ಭಾ.ದಂ.ಸಂ.ಕಲಂ 506 ಸಹವಾಚಕ ಕಲಂ 34 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೇಯದೊಳಗೆ ಎಸಗಿರುತ್ತೀರಿ ಎಂಬುದಾಗಿದೆ.

ಮೇಲಿನ ಆರೋಪಗಳಿಗೆ ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಗುರಿಯಾಗುವಂತೆ ನಿಮಗೆ ನಿರ್ದೇಶಿಸಲಾಗಿದೆ.

**22 ನೇ ಜೂನ್ ಮಾಹೆ** 2023.

**(ನಂದಿನಿ.ಎಂ.ಎನ್ )**
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂ., ಕೊಳ್ಳೇಗಾಲ.